## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1311 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಎಸ್ ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 29-12-2022 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ಮಹಾನಗರ ಮತ್ತು ಇತರೆ ಮಹಾನಗರಗಳ ವ್ಯಾಪ್ತಿಯಲ್ಲಿ ಎಷ್ಟು ಬಾರ್ ಲೈಸೆನ್ಸ್‌ಗಳನ್ನು ನೀಡಲಾಗಿದೆ ಹಾಗೂ ಎಷ್ಟು ಬಾರ್ ಗಳು ಕಾರ್ಯನಿರ್ವಹಿಸುತ್ತಿವೆ. | 2022-23ನೇ ಸಾಲಿನ ಅಬಕಾರಿ ವರ್ಷದಲ್ಲಿ ಬೆಂಗಳೂರು ಮಹಾನಗರ ಮತ್ತು ಇತರೆ ಮಹಾನಗರಗಳ ವ್ಯಾಪ್ತಿಯಲ್ಲಿ ನವೆಂಬರ್ 2022ರ ಅಂತ್ಯಕ್ಕೆ ಒಟ್ಟು 1,692 ಸಿಎಲ್-9 (ಬಾರ್ ಮತ್ತು ರೆಸ್ಟೋರೆಂಟ್) ಸನ್ನದುಗಳು ನವೀಕರಣಗೊಂಡು ಕಾರ್ಯನಿರ್ವಹಿಸುತ್ತಿವೆ. ಮಹಾನಗರವಾರು ನವೀಕರಣಗೊಂಡ ಸಿಎಲ್-9 (ಬಾರ್ ಮತ್ತು ರೆಸ್ಟೋರೆಂಟ್) ಸನ್ನದುಗಳ ವಿವರಗಳನ್ನು ಅನುಬಂಧದಲ್ಲಿ ಇರಿಸಿದೆ. |
| ಆ | ಗ್ರಾಮಾಂತರ ಭಾಗದಲ್ಲಿ ಅಕ್ರಮ ಮದ್ಯ ವಹಿವಾಟು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುತ್ತಿರುವ ಕಠಿಣ ಕ್ರಮಗಳೇನು? (ಮಾಹಿತಿ ನೀಡುವುದು) | ಗ್ರಾಮಾಂತರ ಭಾಗದಲ್ಲಿ ಅಕ್ರಮ ಮದ್ಯ ಮಾರಾಟವನ್ನು ತಡೆಗಟ್ಟಲು ಅಬಕಾರಿ ಇಲಾಖೆಯಿಂದ ವಲಯ ವ್ಯಾಪ್ತಿಯ ರೂಟ್‌ಗಳಲ್ಲಿ ನಿರಂತರವಾಗಿ ಗಸ್ತು ನಡೆಸಲಾಗುತ್ತಿದೆ. ಸದರಿ ಗಸ್ತಿನ ಸಮಯದಲ್ಲಿ ಮತ್ತು ದೂರು ಸ್ವೀಕೃತವಾದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಸ್ಥಳಗಳ ಮೇಲೆ ದಾಳಿ ನಡೆಸಿ ಅಕ್ರಮಗಳು ಕಂಡುಬಂದಲ್ಲಿ ಅಬಕಾರಿ ಕಾಯ್ದೆ ಮತ್ತು ನಿಯಮಗಳಾನುಸಾರ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ನಿಯಮಿತವಾಗಿ ರಸ್ತೆಗಾವಲು ನಡೆಸಿ ಸಂಶಯಾಸ್ಪದ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಕ್ರಮ ಹತ್ತಿಕಲು ಕ್ರಮವಹಿಸುವ ಕುರಿತು ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಅರಣ್ಯ |



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 26/12/2022 05:10 PM

ಸಂರಕ್ಷಣಾಧಿಕಾರಿಗಳೊಂದಿಗೆ ಜಂಟಿ ಕಾರ್ಯಚರಣೆ ನಡೆಸಲಾಗುತ್ತಿದೆ. ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 50ರಂತೆ ಕಾರ್ಯವ್ಯಾಪ್ತಿಯಲ್ಲಿ ನಡೆಯುವ ಅಬಕಾರಿ ಅಕ್ರಮಗಳ ಕುರಿತು ಮಾಹಿತಿ ನೀಡಲು ತಿಳುವಳಿಕೆ ಪತ್ರ ಜಾರಿಗೊಳಿಸಲಾಗಿರುತ್ತದೆ.

ಕಳೆದ ಮೂರು ವರ್ಷಗಳಲ್ಲಿ ರಾಜ್ಯಾದ್ಯಂತ ನಡೆಸಿದ ದಾಳಿ, ದಾಖಲಿಸಿರುವ ಪ್ರಕರಣಗಳ ವಿವರ ಕೆಳಕಂಡಂತಿವೆ.

| ಅಬಕಾರಿ ಸಾಲು (ಜುಲೈ ರಿಂದ ಜೂನ್ ಮಾಹೆವರೆಗೆ) | ನಡೆಸಿದ ದಾಳಿ | ದಾಖಲಿಸಿದ ಪ್ರಕರಣಗಳು | | |
|---|---|---|---|---|
| | | ಕ.ಅ.ಕಾಯ್ದೆ 1965ರ ಕಲಂ 32,34 | ಕ.ಅ.ಕಾಯ್ದೆ 1965ರ ಕಲಂ 15(ಎ) | ಒಟ್ಟು |
| 2020-21 | 73906 | 3480 | 22299 | 25779 |
| 2021-22 | 79358 | 2927 | 26936 | 29863 |
| 2022-23 (ಅಕ್ಟೋಬರ್ ಮಾಹೆಯ ಅಂತ್ಯದವರೆಗೆ) | 25890 | 1257 | 9102 | 10359 |
| **ಒಟ್ಟು** | **1,79,154** | **7,664** | **58,337** | **66,001** |

ಆಇ 113 ಇಎಲ್‌ಕ್ಯೂ 2022

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 26/12/2022 05:10 PM